ಉದಯವಾಣಿ
ಕನ್ನಡ ದಿನಪತ್ರಿಕೆ

# ಘಟಿಕೋತ್ಸವ ವಿದ್ಯಾರ್ಥಿ ಜೀವನದ ಅಪೂರ್ವ ಕ್ಷಣ

## ■ ಒಂದೆಡೆ ಪದವಿ ಪಡೆದ ಸಂತಸ; ಮತ್ತೊಂದೆಡೆ ವಿವಿಯಿಂದ ಹೊರಹೋಗುವ ಬೇಸರ: ಪಾಂಡೆ

**ಬೆಂಗಳೂರು:** ವಿದ್ಯಾರ್ಥಿಗಳು ತಾವು ಕಲಿತ ಶಿಕ್ಷಣವನ್ನು ದೇಶದ ಅಭಿವೃದ್ಧಿಗಾಗಿ ವಿನಿಯೋಗಿಸಬೇಕು ಎಂದು ಕೇಂದ್ರ ಮಾನವ ಸಂಪನ್ಮೂಲ ಮಂತ್ರಾಲಯದ ರಾಜ್ಯ ಸಚಿವ (ಉನ್ನತ ಶಿಕ್ಷಣ) ಡಾ.ಮಹೇಂದ್ರನಾಥ್ ಪಾಂಡೆ ಸಲಹೆ ನೀಡಿದರು.

ಕನಕಪುರ ರಸ್ತೆಯ ಜಕ್ಕಸಂದ್ರದ ಜೈನ್ ವಿಶ್ವವಿದ್ಯಾಲಯದ ಕ್ಯಾಂಪಸ್‌ನಲ್ಲಿ ಇತ್ತೀಚೆಗೆ ಆಯೋಜಿಸಲಾಗಿದ್ದ 'ವಿವಿಯ 6ನೇ ಘಟಿಕೋತ್ಸವ'ದಲ್ಲಿ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿ ಅವರು ಮಾತನಾಡಿದರು.

ಕಾಲೇಜು ಶಿಕ್ಷಣ ವಿದ್ಯಾರ್ಥಿ ದಿಸೆಯಲ್ಲಿ ಅತಿ ಮುಖ್ಯಘಟ್ಟ. ಮುಂದಿನ ಜೀವನಕ್ಕೆ ಅಡಿಪಾಯ. ಇಲ್ಲಿ ಕಲಿತ ಶಿಕ್ಷಣವನ್ನು ವಿದ್ಯಾರ್ಥಿಗಳು ಕೇವಲ ತಮ್ಮ ಉದ್ಯೋಗ, ಜೀವನಕ್ಕಷ್ಟೇ ಸೀಮಿತಗೊಳಿಸದೆ, ಹೊಸ ಸಂಶೋಧನೆಯಲ್ಲಿ ತೊಡಗಿಸಿಕೊಳ್ಳುವ ಮೂಲಕ ದೇಶದ ಅಭಿವೃದ್ಧಿಗೂ ಕೊಡುಗೆ ನೀಡಬೇಕು. ಭಾರತ ಜಾಗತಿಕ ಮಟ್ಟದಲ್ಲಿ ಉನ್ನತ ಸ್ಥಾನಕ್ಕೇರುವಂತೆ ಮಾಡುವ ಜವಾಬ್ದಾರಿ ಪ್ರತಿಯೊಬ್ಬ ವಿದ್ಯಾರ್ಥಿಗಳ ಮೇಲೂ ಇದೆ ಎಂದರು.



**ಜಕ್ಕಸಂದ್ರದ ಜೈನ್ ವಿಶ್ವವಿದ್ಯಾಲಯದ ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡುತ್ತಿರುವ ಕೇಂದ್ರ ಸಚಿವ ಡಾ.ಮಹೇಂದ್ರನಾಥ್ ಪಾಂಡೆ.**

ಘಟಿಕೋತ್ಸವ ವಿದ್ಯಾರ್ಥಿ ಜೀವನದಲ್ಲಿ ಅಪೂರ್ವ ಕ್ಷಣ. ಪದವಿ ಪ್ರಮಾಣ ಪತ್ರ ಪಡೆಯುವುದು ಒಂದೆಡೆ ಸಂತೋಷವಾದರೆ, ಕಲಿತ ವಿಶ್ವವಿದ್ಯಾಲಯ, ಶಿಕ್ಷಣ ಸಂಸ್ಥೆಯಿಂದ ಹೊರ ಹೋಗಬೇಕಾದ ಅನಿವಾರ್ಯತೆಯ ಬೇಸರ ಪ್ರತಿಯೊಬ್ಬರನ್ನೂ ಕಾಡುತ್ತದೆ. ಪ್ರತಿಯೊಬ್ಬರೂ ತಾವು ಕಲಿತ ಶಿಕ್ಷಣ ಸಂಸ್ಥೆಗೆ, ತಮ್ಮನ್ನು ಬೆಳೆಸಿದ ಸಮಾಜಕ್ಕೆ ಏನಾದರೂ ಕೊಡುಗೆ ನೀಡಬೇಕು ಎಂದರು.

ವಿದ್ಯಾರ್ಥಿಗಳು ಸಾಹಿತ್ಯ ಕ್ಷೇತ್ರದತ್ತಲೂ ಹೆಚ್ಚು ಗಮನ ಹರಿಸಬೇಕು. ಯುವ ಪೀಳಿಗೆಯಿಂದ ಭಾರತದ ಸಾಹಿತ್ಯ ಕ್ಷೇತ್ರದ ಅಭಿವೃದ್ಧಿ ಕೃಷಿ ಕಾರ್ಯ ನಡೆಯಬೇಕಿದೆ. ವಿದ್ಯಾರ್ಥಿಗಳು ಮುಂದಿನ ಶಿಕ್ಷಣ ಅಥವಾ ವೃತ್ತಿ ಬದುಕಿನ ನಡುವೆಯೇ ಓದು, ಬರವಣಿಗೆಯ ಅಭ್ಯಾಸ ರೂಢಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಘಟಿಕೋತ್ಸವದಲ್ಲಿ ಮಧು, ಪಲ್ಲಾಟಿ, ಬಿ. ಹೇಮಲತಾ, ಎಸ್.ಸುಪ್ರಿಯಾ, ಎಸ್.ರಮ್ಯಾ ಸೇರಿದಂತೆ ವಿವಿಧ ವಿಭಾಗಗಳಲ್ಲಿ ಅತಿ ಹೆಚ್ಚು ಅಂಕ ಗಳಿಸುವ ಮೂಲಕ ಪ್ರಥಮ ಸ್ಥಾನ ಪಡೆದ 69 ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸಚಿವರು ಚಿನ್ನದ ಪದಕ ಪ್ರದಾನ ಮಾಡಿದರು. 47 ಮಂದಿ ಸಂಶೋಧನಾ ವಿದ್ಯಾರ್ಥಿಗಳಿಗೆ ಪಿಎಚ್‌ಡಿ ಪ್ರದಾನ ಮಾಡಲಾಯಿತು. ವಿವಿಧ ವಿಭಾಗಗಳ ಒಟ್ಟು 2422 ಮಂದಿ ಪದವೀಧರರಿಗೆ ಘಟಿಕೋತ್ಸವದಲ್ಲಿ ಉಪಸ್ಥಿತಿ ಹಾಗೂ ಅನುಪಸ್ಥಿತಿಯಲ್ಲಿ ಪದವಿ ಪ್ರಮಾಣ ಪತ್ರ ನೀಡಲಾಯಿತು.

ಜೈನ್ ವಿವಿಯ ಕುಲಾಧಿಪತಿ ಪದ್ಮಶ್ರೀ ಡಾ.ಸಿ.ಜಿ.ಕೃಷ್ಣದಾಸ್ ನಾಯರ್, ಕುಲಪತಿ ಡಾ.ಎನ್.ಸುಂದರರಾಜನ್, ಕುಲಸಚಿವ ಎಚ್.ವಿ.ಎಚ್. ಕೃಷ್ಣನ್, ಉಪಕುಲಪತಿ ಡಾ. ಸಂದೀಪ್ ಶಾಸ್ತ್ರಿ ಇತರರು ಉಪಸ್ಥಿತರಿದ್ದರು.